**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 141 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:04.02.2020

**ಸುತ್ತೋಲೆ**

**ವಿಷಯ:** ದಿನಾಂಕ 31.01.2020 ರಿಂದ 13.02.2020 ರವರೆಗೆ ಸ್ಪರ್ಷ್ ಕುಷ್ಠ ರೋಗ ಜಾಗೃತಿ ಅಭಿಯಾನ ಹಮ್ಮಿಕೊಳ್ಳುವ ಬಗ್ಗೆ.

******

ಕೇಂದ್ರ ಕುಷ್ಠ ರೋಗ ವಿಭಾಗವು ಪ್ರತಿ ವರ್ಷ ಜನವರಿ 30ನೇ ದಿನಾಂಕವನ್ನು ಕುಷ್ಠ ರೋಗ ನಿವಾರಣಾ ದಿನವನ್ನಾಗಿ ಆಚರಿಸುತ್ತಿದ್ದು, ಈ ಸಂದರ್ಭದಲ್ಲಿ ಕುಷ್ಠ ರೋಗದ ಬಗ್ಗೆ ಜಾಗೃತಿಯ ಸಂದೇಶವನ್ನು ಮಾಹಿತಿ, ಶಿಕ್ಷಣ ಹಾಗೂ ಸಂವಹನೆ ಕಾರ್ಯಕರ್ತರ ಮುಖಾಂತರ ರಾಷ್ಟ್ರಾದ್ಯಂತ ಪ್ರಚರಿಸಲಾಗುತ್ತದೆ. ಈ ಅಭಿಯಾನದ ಸಂದರ್ಭದಲ್ಲಿ ದಿನಾಂಕ 31.01.2020 ರಿಂದ 13.02.2020 ರವರೆಗೆ 'ಸ್ಪರ್ಷ್ ಕುಷ್ಠ ರೋಗ ಜಾಗೃತಿ' ಅಭಿಯಾನವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಹಮ್ಮಿಕೊಂಡಿದ್ದು, ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಜಿಲ್ಲಾ ಕುಷ್ಠ ರೋಗ ನಿವಾರಣಾ ಅಧಿಕಾರಿಗಳು, ಜಿಲ್ಲಾ ಸಮನ್ವಯಧಿಕಾರಿಗಳ ಸಹಯೋಗದೊಂದಿಗೆ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳು ಮತ್ತು ಸಭೆಗಳನ್ನು ನಡೆಸಲು ಹಾಗೂ ಕುಷ್ಠ ರೋಗಕ್ಕೆ ಸಂಬಂಧಿಸಿದ ವಿಷಯಗಳ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸೂಚಿಸಲಾಗಿದೆ.

ಅದರಂತೆ, ಎಲ್ಲಾ ಜಿಲ್ಲಾ ಪಂಚಾಯತಿಗಳು/ತಾಲ್ಲೂಕು ಪಂಚಾಯತಿಗಳು ಮತ್ತು ಗ್ರಾಮ ಪಂಚಾಯತಿಗಳು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಹಾಗೂ ತೆಗೆದುಕೊಂಡಿರುವ ಕ್ರಮದ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ವರದಿ ಕಳುಹಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಿದೆ.

4/2/2020

(ಡಿ.ಜಿ.ನಾರಾಯಣ)
ಪೀಠಾಧಿಕಾರಿ (ಗ್ರಾ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾಯನಿರ್ವಾಹಕ ಅಧಿಕಾರಿಗಳು.